**Akashvani : Bangalore**
**National Bulletin In Kannada**
**29.06.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**29.06.2024 / 7.35 am**

<><*<><>*><>

ಮುಖ್ಯಾಂಶಗಳು

೧. ರಾಜ್ಯಸಭೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ

೨. ಬಿಗಿ ಭದ್ರತೆಯ ನಡುವೆ ಇಂದಿನಿಂದ ಪವಿತ್ರ ಅಮರನಾಥ ಯಾತ್ರೆ ಆರಂಭ

೩. ಯುಜಿಸಿ-ನೆಟ್ ಜೂನ್ ೨೦೨೪: ಪರೀಕ್ಷಾ ದಿನಾಂಕಗಳನ್ನು ಘೋಷಿಸಿದ ಎನ್‌ಟಿಎ

೪. ಏಷ್ಯಾ ಜೂನಿಯರ್ ಮಿಕ್ಸೆಡ್ ಟೀಮ್ ಚಾಂಪಿಯನ್‌ಶಿಪ್: ವಿಯೆಟ್ನಾಂ ವಿರುದ್ಧ ಭಾರತಕ್ಕೆ ಜಯ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದಿನ ಫೈನಲ್ ಪಂದ್ಯದಲ್ಲಿ ಭಾರತ - ದಕ್ಷಿಣ ಆಫ್ರಿಕಾ ಹಣಾಹಣಿ

<><*<><>*><>

ಸಂಸತ್ತಿನ ಉಭಯ ಸದನಗಳಲ್ಲಿ ನಿನ್ನೆ ನೀಟ್ ಪರೀಕ್ಷೆ ಪ್ರಕರಣ ಸದ್ದು ಮಾಡಿತು. ನೀಟ್ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ ಪ್ರತಿಪಕ್ಷಗಳು ಪ್ರತಿಭಟನೆ ನಡೆಸಿದರು. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಕಾಂಗ್ರೆಸ್ ಸದಸ್ಯರು ಘೋಷಣೆ ಕೂಗಿದರು. ಕಾಂಗ್ರೆಸ್, ಡಿಎಂಕೆ, ಟಿಎಂಸಿ, ಸಮಾಜವಾದಿ ಪಕ್ಷ ಮತ್ತು ಇತರ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸ್ಪೀಕರ್ ಓಂ ಬಿರ್ಲಾ, ಸಮಸ್ಯೆಯನ್ನು ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆ. ಸುಗಮ ಕಲಾಪ ನಡೆಸಲು ಬಿಡದಿರುವುದು ಸಂಸದೀಯ ಪ್ರಜಾಪ್ರಭುತ್ವಕ್ಕೆ ಶೋಭೆ ತರುವುದಿಲ್ಲ ಎಂದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಸದಸ್ಯರು, ಈ ವಿಷಯವನ್ನು ಪ್ರಸ್ತಾಪಿಸಬಹುದು ಎಂದು ಅವರು ಹೇಳಿದರು.

<><*<><>*><>

ನೀಟ್ ಪರೀಕ್ಷೆ ವಿಚಾರವಾಗಿ ಪ್ರತಿಪಕ್ಷಗಳ ಗದ್ದಲದ ನಡುವೆಯೇ ರಾಜ್ಯಸಭೆಯಲ್ಲಿ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ನಡೆಸಲಾಯಿತು. ಚರ್ಚೆಗೆ ಒಟ್ಟು ೨೧ ಗಂಟೆಗಳ ಕಾಲಾವಕಾಶ ನೀಡಲಾಗಿದೆ. ಚರ್ಚೆಯನ್ನು ಆರಂಭಿಸಿದ ಬಿಜೆಪಿ ಸಂಸದ

ಸುಧಾಂಶು ತ್ರಿವೇದಿ, ಕಳೆದ ೧೦ ವರ್ಷಗಳ ನರೇಂದ್ರ ಮೋದಿ ಸರ್ಕಾರದ ಯಶಸ್ಸಿನ ಕುರಿತು ವಿವರಿಸಿದರು. ಲೋಕಸಭೆ ಚುನಾವಣೆಯನ್ನು ಉಲ್ಲೇಖಿಸಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಹೋಲಿಸಿದರೆ ದಕ್ಷಿಣ ರಾಜ್ಯಗಳಲ್ಲಿ ಎನ್‌ಡಿಎ ಹೆಚ್ಚು ಮತಗಳನ್ನು ಪಡೆದಿದೆ ಎಂದು ಹೇಳಿದರು. ಎನ್‌ಡಿಎ ಸರ್ಕಾರ ೩೪ ಕೋಟಿ ಎಲ್‌ಇಡಿ ಬಲ್ಬ್‌ಗಳನ್ನು ವಿತರಿಸಿದ್ದು, ಹಸಿರು ಇಂಧನ ಉತ್ಪಾದನೆಗೆ ಬದ್ಧವಾಗಿದೆ ಎಂದು ತ್ರಿವೇದಿ ಹೇಳಿದರು. ಬಿಜೆಪಿ ಸಂಸದರಾದ ರಾಕೇಶ್ ಸಿನ್ಹಾ, ಭೀಮ್ ಸಿಂಗ್, ವೈಎಸ್‌ಆರ್ ಕಾಂಗ್ರೆಸ್ ಸಂಸದ ಗೊಲ್ಲ ಬಾಬುರಾವ್ ಸೇರಿದಂತೆ ಇತರರು ಚರ್ಚೆಯಲ್ಲಿ ಭಾಗವಹಿಸಿದ್ದರು. ಬಳಿಕ ಮಾತನಾಡಿದ ವೈಎಸ್‌ಆರ್ ಕಾಂಗ್ರೆಸ್ ಸಂಸದ ಗೋಲಾ ಬಾಬು ರಾವ್, ಜಮ್ಮು ಮತ್ತು ಕಾಶ್ಮೀರದಲ್ಲಿ ೩೭೦ ನೇ ವಿಧಿಯನ್ನು ರದ್ದುಗೊಳಿಸಿದ್ದಕ್ಕಾಗಿ ಬಿಜೆಪಿ ನೇತೃತ್ವದ ಸರ್ಕಾರವನ್ನು ಶ್ಲಾಘಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಅವರು ೩೭೦ ನೇ ವಿಧಿಯ ರದ್ದತಿಯ ಪರವಾಗಿದ್ದರು ಎಂದು ಅವರು ಹೇಳಿದರು. ಇದೇ ವೇಳೆ ಆಂಧ್ರಪ್ರದೇಶಕ್ಕೆ ವಿಶೇಷ ಸ್ಥಾನಮಾನಕ್ಕಾಗಿ ಒತ್ತಾಯಿಸಿದರು. ಆಂಧ್ರಪ್ರದೇಶವು ಅಭಿವೃದ್ಧಿ ಸೂಚ್ಯಂಕಗಳ ಕೊರತೆಯನ್ನು ಹೊಂದಿದೆ. ಹಾಗಾಗಿ ವಿಶೇಷ ಸ್ಥಾನಮಾನದ ಮೂಲಕ ರಾಜ್ಯ ಸಮಗ್ರ ಅಭಿವೃದ್ಧಿ ಹೊಂದಲಿದೆ ಎಂದು ಗೋಲಾ ಬಾಬು ರಾವ್ ಹೇಳಿದರು.

<><*<><>*><>

ಪವಿತ್ರ ಅಮರನಾಥ್ ಗುಹಾ ದೇಗುಲಕ್ಕೆ ೫೨ ದಿನಗಳ ಸುದೀರ್ಘ ವಾರ್ಷಿಕ ತೀರ್ಥಯಾತ್ರೆ ಇಂದು ಬೆಳಗ್ಗೆ ಕಾಶ್ಮೀರ ಕಣಿವೆಯ ಪಹಲ್ಗಾಮ್ ಮತ್ತು ಬಾಲ್ಟಾಲ್ ಮಾರ್ಗಗಳಿಂದ ಬಿಗಿ ಭದ್ರತೆಯ ನಡುವೆ ಆರಂಭವಾಯಿತು. ನುನ್ವಾನ್ ಮತ್ತು ಬಾಲ್ಟಾಲ್‌ನಲ್ಲಿರುವ ಅವಳಿ ನೆಲೆಗಳ ಶಿಬಿರಗಳಿಗೆ ನಿನ್ನೆ ಆಗಮಿಸಿದ ಮೊದಲ ತಂಡದ ಯಾತ್ರಿಗಳು, ಇಂದು ಮುಂಜಾನೆ ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿರುವ ಪವಿತ್ರ ಅಮರನಾಥ ಗುಹೆಯತ್ತ ಸಾಗಿದ್ದಾರೆ. ಆಗಸ್ಟ್ ೧೯ ರ ಶ್ರಾವಣ ಪೂರ್ಣಿಮೆಯಂದು ಯಾತ್ರೆ ಮುಕ್ತಾಯವಾಗಲಿದೆ. ಯಾತ್ರೆಯನ್ನು ಸುಗಮವಾಗಿ ನಡೆಸಲು ಜಮ್ಮು ಮತ್ತು ಕಾಶ್ಮೀರ ಆಡಳಿತವು ಬಿಗಿ ಭದ್ರತೆ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡಿದೆ. ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ನಿನ್ನೆ ಶ್ರೀನಗರದಲ್ಲಿ ಅಮರನಾಥ ಯಾತ್ರೆಯ ಯಾತ್ರಾರ್ಥಿಗಳನ್ನು ಸ್ವಾಗತಿಸಿದರು.

<><*<><>*><>

ಅಲ್ಲದೇ, ನಾಲ್ಕು ವರ್ಷಗಳ ಇಂಟಿಗ್ರೇಟೆಡ್ ಟೀಚರ್ ಎಜುಕೇಶನ್ ಪ್ರೋಗ್ರಾಂ-ಐಟಿಇಪಿ ಪ್ರವೇಶಕ್ಕಾಗಿ ರಾಷ್ಟ್ರೀಯ ಸಾಮಾನ್ಯ ಪ್ರವೇಶ ಪರೀಕ್ಷೆ-ಎನ್‌ಸಿಇಟಿ ಅನ್ನು ಜುಲೈ ೧೦ ರಂದು ನಡೆಸಲಾಗುವುದು. ಈ ಎರಡೂ ಪರೀಕ್ಷೆಗಳನ್ನು ಮುಂದೂಡಲಾಗಿತ್ತು. ಅಖಿಲ ಭಾರತ ಆಯುಷ್ ಸ್ನಾತಕೋತ್ತರ ಪ್ರವೇಶ ಪರೀಕ್ಷೆ-೨೦೨೪ ಹಿಂದಿನ ವೇಳಾಪಟ್ಟಿಯಂತೆ ಜುಲೈ ೬ ರಂದು ನಡೆಯಲಿದೆ ಎಂದು ಎನ್‌ಟಿಎ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಅಧಿಕೃತ ವೆಬ್‌ಸೈಟ್ ತಿತಿತಿ.ಟಿಣಚಿ.ಚಿಛಿ.iಟಿ ಗೆ ಭೇಟಿ ನೀಡುವಂತೆ ಎನ್‌ಟಿಎ ಮಾಹಿತಿ ನೀಡಿದೆ.

<><*<><>*><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಯಲ್ಲಿ ಸುಧಾರಣೆಗಳನ್ನು ಶಿಫಾರಸು ಮಾಡಲು ಶಿಕ್ಷಣ ಸಚಿವಾಲಯ ರಚಿಸಿರುವ ಉನ್ನತ ಮಟ್ಟದ ತಜ್ಞರ ಸಮಿತಿಯು ಸುಧಾರಣೆ ಮತ್ತು ಪುನರ್‌ರಚನೆಯ ಕುರಿತು ವಿದ್ಯಾರ್ಥಿಗಳು ಮತ್ತು ಪೋಷಕರಿಂದ ಸಲಹೆಗಳನ್ನು ಕೋರಿದೆ. ಸಮಿತಿಯ ನೇತೃತ್ವವನ್ನು

ಇಸ್ರೋ ಮಾಜಿ ಅಧ್ಯಕ್ಷ ಡಾ. ಕೆ.ರಾಧಾಕೃಷ್ಣನ್ ವಹಿಸಿದ್ದು, ಮೈ ಜಿ ಓ ವಿ ಡಾಟ್ ಇನ್ ಜಾಲತಾಣದ ಮೂಲಕ ಸಲಹೆಗಳು ಮತ್ತು ಪ್ರತಿಕ್ರಿಯೆಗಳನ್ನು ಸ್ವೀಕರಿಸಲಿದೆ. ಸಾರ್ವಜನಿಕರು ತಮ್ಮ ಪ್ರತಿಕ್ರಿಯೆಗಳನ್ನು ಜುಲೈ ೭ ರವರೆಗೆ ನೀಡಬಹುದಾಗಿದೆ. ಸಮಿತಿಯು ತನ್ನ ವರದಿಯನ್ನು ಎರಡು ತಿಂಗಳೊಳಗೆ ಶಿಕ್ಷಣ ಸಚಿವಾಲಯಕ್ಕೆ ಸಲ್ಲಿಸಬೇಕಿದ್ದು, ಪರೀಕ್ಷಾ ಪ್ರಕ್ರಿಯೆಯ ಕಾರ್ಯವಿಧಾನದಲ್ಲಿನ ಸುಧಾರಣೆ, ಡೇಟಾ ಭದ್ರತಾ ಶಿಷ್ಟಾಚಾರದಲ್ಲಿ ಸುಧಾರಣೆ ಮತ್ತು ಎನ್‌ಟಿಎ ಕಾರ್ಯನಿರ್ವಹಣೆಯ ಕುರಿತು ಶಿಫಾರಸು ಮಾಡಲಿದೆ.

<><*<><>*><>

ನೀಟ್ ಪರೀಕ್ಷೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನೀಟ್ ವಿದ್ಯಾರ್ಥಿಗಳಿಗೆ ಭರವಸೆ ನೀಡಿದ್ದಾರೆ. ಸಂಸತ್ತಿನ ಆವರಣದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಷಯವನ್ನು ಸರ್ಕಾರ ಸೂಕ್ಷ್ಮವಾಗಿ ಪರಿಗಣಿಸಿದ್ದು, ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ಯಾವುದೇ ಸಮಸ್ಯೆಗಳಿದ್ದರೂ ಸದನದಲ್ಲಿ ಚರ್ಚಿಸಲು ಸರಕಾರ ಸಿದ್ಧವಿದೆ ಎಂದು ತಿಳಿಸಿದರು.

<><*<><>*><>

ಆಕಾಶವಾಣಿಯಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ನಡೆಯುವ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶ ಮತ್ತು ವಿದೇಶದ ಜನರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೧೧ ನೇ ಸಂಚಿಕೆಯಾಗಿದೆ. ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಇದು ಮೊದಲ ಸಂಚಿಕೆಯಾಗಿದೆ. ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, ೦೦|ಖ ನ್ಯೂಸ್ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನ ಸಂಪೂರ್ಣ ನೆಟ್‌ವರ್ಕ್‌ನಲ್ಲಿ ಪ್ರಸಾರ ಮಾಡಲಾಗುತ್ತದೆ. ಇದು ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಓ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿ ಲೈವ್ ಸ್ಟ್ರೀಮ್ ಆಗುತ್ತದೆ. ಆಕಾಶವಾಣಿ ಹಿಂದಿ ಪ್ರಸಾರದ ನಂತರ ತಕ್ಷಣವೇ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡುತ್ತದೆ.

<><*<><>*><>

ಬೆಂಗಳೂರಿನ ಆಕಾಶವಾಣಿ ಸುದ್ದಿ ವಿಭಾಗದಿಂದ ಪರೀಕ್ಷೆ ನಿರ್ವಹಣೆ ಮತ್ತು ಸರ್ಕಾರದ ಅಗತ್ಯ ಸುಧಾರಣೆಗಳ ಕುರಿತ ಸಂವಾದ ಕಾರ್ಯಕ್ರಮವು ಇಂದು ಬೆಳಗ್ಗೆ ೯.೦೫ ಕ್ಕೆ ಪ್ರಸಾರವಾಗಲಿದೆ. ಕಾರ್ಯಕ್ರಮದಲ್ಲಿ ಬೆಂಗಳೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಉಪಕುಲಪತಿ ಡಾ.ಕೆ.ಆರ್.ವೇಣುಗೋಪಾಲ್ ಸಂಪನ್ಮೂಲ ವ್ಯಕ್ತಿಗಳಾಗಿದ್ದು, ಐಐಎಚ್‌ಆರ್‌ನ ನಿವೃತ್ತ ವಿಜ್ಞಾನಿ ಡಾ.ಬಿ.ನಾರಾಯಣಸ್ವಾಮಿ ಸಂವಾದ ನಡೆಸಿಕೊಡಲಿದ್ದಾರೆ.

<><*<><>*><>

ಇಂಡೋನೇಷ್ಯಾದ ಯೋಗ್ಯಕರ್ತದಲ್ಲಿ ನಿನ್ನೆ ನಡೆದ ಬ್ಯಾಡ್ಮಿಂಟನ್ ಏಷ್ಯಾ ಜೂನಿಯರ್ ಮಿಕ್ಸೆಡ್ ಟೀಮ್ ಚಾಂಪಿಯನ್‌ಶಿಪ್‌ನ 'ಸಿ' ಗುಂಪಿನ ಪಂದ್ಯದಲ್ಲಿ ವಿಯೆಟ್ನಾಂ ವಿರುದ್ಧ ಭಾರತ ೫-೦ ಅಂತರದ

ಭರ್ಜರಿ ಜಯದೊಂದಿಗೆ ತನ್ನ ಅಭಿಯಾನವನ್ನು ಆರಂಭಿಸಿದೆ. ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರ್ಗವ್ ರಾಮ್ ಅರಿಗೆಲಾ ಮತ್ತು ವೆನ್ನಲಾ.ಕೆ ಜೋಡಿಯು ೧೭-೨೧, ೨೧-೧೯, ೨೧-೧೭ ಸೆಟ್‌ಗಳಿಂದ ಫಾಮ್ ವಾನ್ ಟ್ರೂಂಗ್ ಮತ್ತು ಬುಯಿ ಬಿಚ್ ಫುವಾಂಗ್ ಅವರನ್ನು ಸೋಲಿಸಿತು. ಇದೇ ವೇಳೆ, ಸಿಂಗಲ್ಸ್ ವಿಭಾಗದಲ್ಲಿ ಪ್ರಣಯ್ ಶೆಟ್ಟಿಗಾರ್ ೧೦-೨೧, ೨೧-೧೮, ೨೧-೧೭ ಸೆಟ್‌ಗಳಿಂದ ಟ್ರಾನ್ ಕ್ವೋಕ್ ಖಾನ್ ಅವರನ್ನು ಪರಾಭವಗೊಳಿಸಿದರು. ಅಲ್ಲದೇ, ತನ್ವಿ ಶರ್ಮಾ ಅವರು ಟ್ರಾನ್ ಥಿ ಅನ್ ವಿರುದ್ಧ ೨೧-೧೩, ೨೧-೧೮ ಸೆಟ್‌ಗಳಿಂದ ಗೆಲುವು ಸಾಧಿಸಿದರು. ಪುರುಷರ ಡಬಲ್ಸ್ ವಿಭಾಗದಲ್ಲಿ ಅರ್ಶ್ ಮೊಹಮ್ಮದ್ ಮತ್ತು ಸಂಸ್ಕಾರ್ ಸಾರಸ್ವತ್ ಜೋಡಿಯು ೨೦-೨೨, ೨೧-೧೬, ೨೧-೧೩ ಸೆಟ್‌ಗಳಿಂದ ನುಯೆನ್ ವಾನ್ ಮಾಯ್ ಮತ್ತು ಫಾಮ್ ವಾನ್ ಟ್ರೂಂಗ್ ಜೋಡಿಯನ್ನು ಪರಾಭವಗೊಳಿಸಿತು. ಇದೇ ವೇಳೆ, ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ನವ್ಯಾ ಕಂಡೇರಿ ಮತ್ತು ಶ್ರಾವಣಿ ವಾಲೇಕರ್ ಜೋಡಿಯು, ಬುಯಿ ಬಿಚ್ ಫುವಾಂಗ್ ಮತ್ತು ಟ್ರಾನ್ ಥಿ ಅನ್ ಜೋಡಿ ವಿರುದ್ಧ ೨೧-೬, ೧೯-೨೧, ೨೧-೧೪ ಸೆಟ್‌ಗಳಿಂದ ಗೆಲುವು ಸಾಧಿಸಿದ್ದಾರೆ. ಇಂದು ನಡೆಯಲಿರುವ ಎರಡನೇ ರೌಂಡ್ ರಾಬಿನ್ ಟೈನಲ್ಲಿ ಭಾರತವು ಫಿಲಿಪ್ಪೀನ್ಸ್ ವಿರುದ್ಧ ಸೆಣಸಲಿದೆ.

<><*<><>*><>

ಜಗತ್ತಿನಾದ್ಯಂತದ ಕ್ರಿಕೆಟ್ ಪ್ರೇಮಿಗಳು ಕಾತರದಿಂದ ಕಾಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯ ಇಂದು ವೆಸ್ಟ್ ಇಂಡೀಸ್‌ನ ಬಾರ್ಬಡೋಸ್‌ನ ಕೆನ್ಸಿಂಗ್‌ಟನ್ ಓವಲ್ ಕ್ರೀಡಾಂಗಣದಲ್ಲಿ ನಡೆಯಲಿದೆ. ೨೦೧೩ ರ ಚಾಂಪಿಯನ್ ಟ್ರೋಫಿ ಗೆದ್ದ ಬಳಿಕ, ಐಸಿಸಿ ಪ್ರಶಸ್ತಿ ಜಯಿಸಲು ವಿಫಲವಾಗಿರುವ ಭಾರತ, ಮೊದಲ ಬಾರಿಗೆ ಐಸಿಸಿ ವಿಶ್ವಕಪ್ ಫೈನಲ್ ಪ್ರವೇಶಿಸಿರುವ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ ಸಂಘಟಿತ ಪ್ರದರ್ಶನ ನೀಡಲು ಸಕಲ ಸಿದ್ಧತೆ ಕೈಗೊಂಡಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><*<><>*><>

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮಹಿಳಾ ಕ್ರಿಕೆಟ್‌ನ ಏಕೈಕ ಟೆಸ್ಟ್ ಪಂದ್ಯದಲ್ಲಿ ಆತಿಥೇಯ ಭಾರತ ತಂಡ ಉತ್ತಮ ಆರಂಭ ಕಂಡಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಭಾರತ ತಂಡ, ನಿನ್ನೆ ಮೊದಲ ದಿನದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೫೨೫ ರನ್ ಗಳಿಸಿದೆ. ಭಾರತೀಯ ವನಿತೆಯರು ಮೊದಲ ಅವಧಿಯಲ್ಲಿಯೇ ೧೦೦ರ ಗಡಿ ದಾಟಿ ೧೩೦ ರನ್ ಗಳಿಸಿದ್ದರು. ಆರಂಭಿಕರಾದ ಶಫಾಲಿ ವರ್ಮಾ ೨೦೫ ರನ್‌ಗಳ ದ್ವಿಶತಕ ಮತ್ತು ಸ್ಮೃತಿ ಮಂಧಾನ ೧೪೯ ರನ್ ನೊಂದಿಗೆ ಶತಕ ಸಿಡಿಸಿದರು. ಇಂದು ಎರಡನೇ ದಿನ ಭಾರತದ ಬ್ಯಾಟಿಂಗ್ ಮುಂದುವರಿಯಲಿದೆ.

<><*<><>*><>

ಏಷ್ಯನ್ ಗೇಮ್ಸ್‌ನಲ್ಲಿ ಯೋಗವನ್ನು ಸೇರಿಸುವ ಭಾರತೀಯ ಒಲಿಂಪಿಕ್ ಅಸೋಸಿಯೇಷನ್-ಐಒಎ ಅಧ್ಯಕ್ಷೆ ಡಾ.ಪಿ.ಟಿ.ಉಷಾ ಅವರ ನಿರ್ಧಾರವನ್ನು ಕೇಂದ್ರ ಯುವಜನ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಸ್ವಾಗತಿಸಿದ್ದಾರೆ. ಇತ್ತೀಚೆಗೆ ಐಒಎ ಅಧ್ಯಕ್ಷರು, ಏಷ್ಯನ್ ಗೇಮ್ಸ್‌ನಲ್ಲಿ ಯೋಗವನ್ನು ಕ್ರೀಡೆಯಾಗಿ ಸೇರಿಸುವ ಪ್ರಸ್ತಾಪವನ್ನು ಪರಿಗಣಿಸುವಂತೆ ಒಲಿಂಪಿಕ್ ಕೌನ್ಸಿಲ್ ಆಫ್ ಏಷ್ಯಾ ಅಧ್ಯಕ್ಷ ರಾಜಾ ರಣಧೀರ್ ಸಿಂಗ್ ಅವರಿಗೆ ಪತ್ರ ಬರೆದಿದ್ದರು.

<><*<><>*><>

ಶ್ರೀಲಂಕಾದಲ್ಲಿ, ವಿವಿಧ ಸ್ಥಳಗಳಲ್ಲಿ ದೊಡ್ಡ ಪ್ರಮಾಣದ ಆನ್‌ಲೈನ್ ಹಣಕಾಸು ಹಗರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ೧೩೭ ಭಾರತೀಯರನ್ನು ಪೊಲೀಸರು ಬಂಧಿಸಿದ್ದಾರೆ. ಶ್ರೀಲಂಕಾದ ಕೇಂದ್ರ ತನಿಖಾ ದಳವು ಮಡಿವೇಲಾ, ಬಟ್ಟರಮುಲ್ಲಾ ಮತ್ತು ನೆಗೊಂಬೊದಲ್ಲಿ ಏಕಕಾಲದಲ್ಲಿ ನಿನ್ನೆ ದಾಳಿ ನಡೆಸಿದ್ದು, ೧೫೮ ಮೊಬೈಲ್ ಫೋನ್‌ಗಳು, ೧೬ ಲ್ಯಾಪ್‌ಟಾಪ್‌ಗಳು ಮತ್ತು ೬೦ ಕಂಪ್ಯೂಟರ್‌ಗಳನ್ನು ವಶಪಡಿಸಿಕೊಂಡಿದೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>